# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 41 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.12.2022 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಭಾಗದ ಜನರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯಡಿ ಸಿಗುವ ಸೌಲಭ್ಯದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. |
| ಆ) | ಗ್ರಾಮೀಣ ಭಾಗದ ಜನರಿಗೆ ಸಮೀಪದ ಸರ್ಕಾರಿ ಆಸ್ಪತ್ರೆಯಲ್ಲಿ ಯಾವ ಯಾವ ಚಿಕಿತ್ಸೆಗಳು ದೊರೆಯುತ್ತವೆ ಎಂಬ ಮಾಹಿತಿಯ ಕೊರತೆಯಿರುವುದರ ಬಗ್ಗೆ ಅರಿವು ಮೂಡಿಸುವಲ್ಲಿ ಸರ್ಕಾರದ ಕ್ರಮವೇನು; | 1. ದಿನ ಪತ್ರಿಕೆಗಳಲ್ಲಿ ಪತ್ರಿಕಾ ಜಾಹಿರಾತು ಪ್ರಕಟಿಸಲಾಗಿದೆ.<br>2. ದೂರದರ್ಶನ ವಾಹಿನಿ ಹಾಗೂ ಆಕಾಶವಾಣಿ ವಾಹಿನಿ ಮೂಲಕ ಯೋಜನೆಯ ಕುರಿತು ಪ್ರಚಾರ ನೀಡಲಾಗಿದೆ.<br>3. ರಾಜ್ಯದ ಎಲ್ಲಾ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಯೋಜನೆಯ ಮಾಹಿತಿ ಕುರಿತು ಆಡಿಯೋ ಜಿಂಗಲ್‌ಗಳನ್ನು ಪ್ರಸಾರ ಮಾಡಲಾಗಿದೆ ಮತ್ತು ಕೆ.ಎಸ್.ಆರ್.ಟಿ.ಸಿ ಬಸ್‌ಗಳಲ್ಲಿ ಬಸ್ ಬ್ರಾಂಡಿಗ್ ಮೂಲಕ ಯೋಜನೆಯ ಜಾಹಿರಾತು ಪ್ರಕಟಿಸಲಾಗಿರುತ್ತದೆ.<br>4. ಸಾರ್ವಜನಿಕ ಆಸ್ಪತ್ರೆ ಹಾಗೂ ನೊಂದಾಯಿತ ಆಸ್ಪತ್ರೆಗಳಲ್ಲಿ ಯೋಜನೆಯ ಮಾಹಿತಿ ಬೋರ್ಡ್‌ಗಳನ್ನು ಅಳವಡಿಸುವ ಮೂಲಕ ಪ್ರಚಾರ ಮಾಡಲಾಗಿದೆ.<br>5. ಗ್ರಾಮೀಣ ಪ್ರದೇಶಗಳಲ್ಲಿ ಗೋಡೆ ಬರಹದ ಮೂಲಕ ಪ್ರಚಾರ ಮಾಡಲಾಗಿದೆ.<br>6. ಯೋಜನೆಯ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ನೀಡುವ ಸಲುವಾಗಿ ಕರಪತ್ರಗಳು ಮತ್ತು ಬ್ರೋಚರ್‌ಗಳನ್ನು ವಿತರಿಸಲಾಗಿದೆ ಹಾಗೂ ವಾಟ್ಸ್ ಅಪ್ ಗ್ರೂಪ್‌ಗಳ ಮೂಲಕ ಯೋಜನೆಯ ಸಂದೇಶಗಳನ್ನು ರವಾನಿಸಲಾಗಿದೆ.<br>7. ಜಿಲ್ಲಾ ಸಂಯೋಜಕರ ಮೂಲಕ ಅಂಗನವಾಡಿ ಕಾರ್ಯಕರ್ತರು, ಸ್ತ್ರೀಶಕ್ತಿ ಗುಂಪುಗಳ ಸದಸ್ಯರಿಗೆ ಶಾಲಾ ಕಾಲೇಜುಗಳ ಮಕ್ಕಳಿಗೆ ಯೋಜನೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>8. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ಗ್ರಾಮ ಸಭೆಗಳಲ್ಲಿ, ಉತ್ಸವಗಳಲ್ಲಿ, ಜಾತ್ರೆಗಳಲ್ಲಿ ಹಾಗೂ ಇತರ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಸ್ಟಾಲ್‌ಗಳನ್ನು ಸ್ಥಾಪಿಸಿ ಯೋಜನೆಯ ಕುರಿತು ಮಾಹಿತಿಯನ್ನು ನೀಡಲಾಗಿದೆ.<br>9. ಯೋಜನೆಯ ಕುರಿತು ಜಾಗೃತಿ ಕಾರ್ಯಕ್ರಮ, ಜಾಥಾ ಕಾರ್ಯಕ್ರಮ ಹಾಗೂ ಬೀದಿ ನಾಟಕ ಮುಂತಾದ ವಿವಿಧ ಕಾರ್ಯಕ್ರಮಗಳನ್ನು ಒಳಗೊಂಡ ಪಾಕ್ಷಿಕ ಆಚರಣೆಯನ್ನು ರಾಜ್ಯದಾದ್ಯಂತ ಎಲ್ಲಾ ಪ್ರಾಥಮಿಕ, ಸಮುದಾಯ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ತಾಲ್ಲೂಕು ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ನಡೆಸಲಾಗಿದೆ.<br>10. ನೊಂದಾಯಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ |

ಯೋಜನೆಯ ಸೌಲಭ್ಯಗಳ ಬಗ್ಗೆ ಮಾಹಿತಿ, ನೀಡಲು [redacted] ರೋಗಿಗಳಿಗೆ ಮಾರ್ಗದರ್ಶನ ಮತ್ತು ಚಿಕಿತ್ಸೆಗೆ ಸಹಕಾರ[redacted]ಲು ಆರೋಗ್ಯ ಮಿತ್ರರನ್ನು ನಿಯೋಜಿಸಲಾಗಿದೆ.

11. ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜ[redacted]ಯ ಕುರಿತು ಪ್ರಾದೇಶಿಕ ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಪ್ರಾದೇಶಿಕ ಸಮಾಲೋಚಕರು, ಸಹಾಯಕ ಪ್ರಾದೇಶಿಕ ಸಮಾಲೋಚಕರು, ಜಿಲ್ಲಾ ಸಂಯೋಜಕರು, ಆರೋಗ್ಯ ಮಿತ್ರರು, ಆಶಾ ಕಾರ್ಯಕರ್ತೆಯರು ಹಾಗೂ ನೊಂದಾಯಿತ ಆಸ್ಪತ್ರೆಗಳ ಪ್ರತಿನಿಧಿಗಳಿಗೆ ಕಾಲಕಾಲಕ್ಕೆ ತರಬೇತಿ ನೀಡಲಾಗಿರುತ್ತದೆ.
12. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಛೇರಿಯಿಂದ ಸಹಾಯವಾಣಿ 1800 425 8330 ಕಾರ್ಯ ನಿರ್ವಹಿಸುತ್ತಿದೆ.
13. ರಾಜ್ಯಾದ್ಯಂತ ಯೋಜನೆಯ ವಿವರ ಹಾಗೂ ಸ್ಪಷ್ಟೀಕರಣಕ್ಕಾಗಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆರೋಗ್ಯ ಮಿತ್ರರನ್ನು ಸಂಪರ್ಕಿಸಲು ಟೋಲ್ ಫ್ರೀ ದೂರವಾಣಿ 1800 425 2646 ಸಂಖ್ಯೆಯನ್ನು ನೀಡಿದೆ.

ಇ) ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳು, ಸಿಬ್ಬಂದಿ ಕೊರತೆ, ಔಷಧಿ ಕೊರತೆ ಇನ್ನಿತರ ಕೊರತೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು?

2021-22ನೇ ಸಾಲಿನ 75 ನೇ ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಅಮೃತ ಆರೋಗ್ಯ ಮೂಲ ಸೌಕರ್ಯ ಉನ್ನತೀಕರಣ ಯೋಜನೆ ಅಡಿಯಲ್ಲಿ ರಾಜ್ಯದಲ್ಲಿನ 750 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತಲಾ ರೂ.20.00 ಲಕ್ಷಗಳ ಅನುದಾನದಲ್ಲಿ ದುರಸ್ಥಿ ಮತ್ತು ನವೀಕರಣ ಕಾಮಗಾರಿಗಳನ್ನು ಕೈಗೊಂಡು ಪ್ರಸ್ತುತ ಕಾಮಗಾರಿಗಳನ್ನು ಪೂರ್ಣಗೊಳಿಸಿ ಉಪಯೋಗಿ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ.

ಗ್ರಾಮೀಣ ಭಾಗದ ಎಲ್ಲಾ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ದುರಸ್ಥಿ ಮತ್ತು ನವೀಕರಣಕ್ಕೆ ಸಂಬಂಧಿಸಿದಂತೆ ಉಪಯೋಗಿ ಇಲಾಖೆಯಿಂದ ಕೋರಿಕೆ ಬಂದಲ್ಲಿ ಅನುದಾನದ ಲಭ್ಯತೆ ಹಾಗೂ ಅವಶ್ಯಕತೆಗನುಗುಣವಾಗಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುವುದು.

ಸಿಬ್ಬಂದಿಗಳ ಕೊರತೆ ನೀಗಿಸಲು ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದ ಹಾಗೂ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

| ಕ್ರ. ಸಂ | ಹುದ್ದೆ | ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ |
|---|---|---|
| | ಕಲ್ಯಾಣ ಕರ್ನಾಟಕ ವೃಂದ | |
| 1. | ಸೈಕಾಲಜಿಸ್ಟ್ | 3 |
| 2. | ಸೈಕ್ಯಾಟ್ರಿಕ್ ಸೋಷಿಯಲ್ ವರ್ಕರ್ | 1 |
| 3. | ಮೈಕ್ರೋ ಬಯಾಲಜಿಸ್ಟ್ | 6 |
| 4. | ಸಹಾಯಕ ಎಂಟಮಾಲಜಿಸ್ಟ್ | 1 |
| 5. | ಫಿಜಿಯೋಥೆರಪಿಸ್ಟ್ | 5 |
| 6. | ಡೆಂಟಲ್ ಮೆಕಾನಿಕ್ | 3 |
| 7. | ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 54 |
| 8. | ನೇತ್ರಾಧಿಕಾರಿ | 15 |
| 9. | ಫಾರ್ಮಸಿ ಅಧಿಕಾರಿ | 98 |
| 10. | ಇ.ಸಿ.ಜಿ ತಂತ್ರಜ್ಞ | 5 |
| 11. | ಡಯಾಲಿಸಿಸ್ ತಂತ್ರಜ್ಞ | 2 |
| 12. | ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ | 126 |

| | | |
|---|---|---|
| 13. | ಎಲೆಕ್ಟ್ರೀಷಿಯನ್ | 1 |
| | ಒಟ್ಟು | 320 |
| | ಉಳಿಕೆ ಮೂಲ ವೃಂದ | |
| 1. | ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 150 |
| 2. | ಫಾರ್ಮಸಿ ಅಧಿಕಾರಿ | 400 |
| 3. | ಕಿರಿಯ ವೈದ್ಯಕೀಯ ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾರಿ | 8 |
| | ಒಟ್ಟು | 558 |

ಪ್ರಾಥಮಿಕ ಆರೋಗ್ಯ ಕೇಂದ್ರಗಳು ಔಷಧಿ ಕೊರತೆ ಇಲ್ಲದಂತೆ ಕಾರ್ಯ ನಿರ್ವಹಿಸಲು ಈ ಕೆಳಕಂಡಂತೆ ವ್ಯವಸ್ಥೆ ಮಾಡಲಾಗಿರುತ್ತದೆ.

1. ಅತ್ಯವಶ್ಯಕ ಔಷಧಗಳ ಪಟ್ಟಿಯಲ್ಲಿರುವ ಔಷಧಿಗಳನ್ನು ಕೆ.ಎಸ್.ಎಂ.ಎಸ್.ಸಿ.ಎಲ್ ನಿಂದ ಖರೀದಿಸಿ ಆರೋಗ್ಯ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.
2. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಎನ್.ಎಫ್.ಡಿ.ಎಸ್ (ರಾಷ್ಟ್ರೀಯ ಉಚಿತ ಔಷಧಗಳ ಸರಬರಾಜು) ನಲ್ಲಿ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವಾರ್ಷಿಕ 50,000/- ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ಈ ಅನುದಾನವನ್ನು ಅವಶ್ಯವಿರುವ ಔಷಧಗಳ ಖರೀದಿಗೆ ಉಪಯೋಗಿಸಬಹುದಾಗಿರುತ್ತದೆ.
3. ರಾಷ್ಟ್ರೀಯ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಬೇಕಾಗಿರುವ ಔಷಧಗಳನ್ನು ಆಯಾ ಕಾರ್ಯಕ್ರಮಗಳಿಂದ ಪೂರೈಸಲಾಗುತ್ತಿದೆ.
4. ಅವಶ್ಯವಿರುವ ಔಷಧಗಳನ್ನು ಆರೋಗ್ಯ ರಕ್ಷಾ ನಿಧಿಯಿಂದ ಆರೋಗ್ಯ ರಕ್ಷಾ ಸಮಿತಿಯ ಅನುಮೋದನೆಯೊಂದಿಗೆ ಔಷಧಿ ಖರೀದಿಗೆ ಉಪಯೋಗಿಸಬಹುದಾಗಿರುತ್ತದೆ.

ಕಡತ ಸಂಖ್ಯೆ: ಆಕುಕ 157 ಎಸ್.ಬಿ.ವಿ. 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು